**ಓ.ಎಸ್. ನಂಃ 458/2023**

**ಡಿ.ಡಬ್ಲ್ಯೂಃ 1**

**ದಿನಾಂಕ 17.06.2026 ರಂದು ಸಾಕ್ಷಿದಾರರನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ ಪ್ರತಿವಾದಿಯ ಪರ: ಶ್ರೀ.ಬಿ.ಎನ್ ವಕೀಲರಿಂದಃ**

ನಾನು ಈ ದಿನ ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣಪತ್ರದ ರೂಪದಲ್ಲಿ ಸಲ್ಲಿಸುತ್ತಿದ್ದು ಅದನ್ನು ನನ್ನ ಮಾಹಿತಿ ಮೇರೆಗೆ ನನ್ನ ವಕೀಲರು ತಯಾರಿಸಿರುತ್ತಾರೆ. ಅದರಲ್ಲಿ ಬರೆದಿರುವ ಸಂಗತಿಗಳು ನಿಜ ಇರುತ್ತವೆ ಮತ್ತು ಅದರಲ್ಲಿರುವ ಸಹಿ ನನ್ನದಾಗಿರುತ್ತದೆ.

ದಿನಾಂಕಃ 28.12.2007 ರ ನೋಂದಾಯಿತ ಕ್ರಯ ಪತ್ರದ ಅಸಲು ಪ್ರತಿಯನ್ನು ನಿಡಿ-2 ಎಂದು, ದಿನಾಂಕಃ 02.07.2009 ರ ನೋಂದಾಯಿತ ದಾನ ಪತ್ರದ ಅಸಲು ಪ್ರತಿಯನ್ನು ನಿಡಿ-3 ಎಂದು, ಋಣಭಾರ ಪ್ರಮಾಣ ಪತ್ರವನ್ನು ನಿಡಿ-4 ಮತ್ತು ನಿಡಿ-5 ಎಂದು, ಡಿಮ್ಯಾಂಡ್ ರಿಜಿಸ್ಟರಿನ ದೃಢೀಕೃತ ನಕಲುಗಳನ್ನು ನಿಡಿ-6 ರಿಂದ ನಿಡಿ-9 ಎಂದು, ತೆರಿಗೆ ಪಾವತಿ ರಶೀದಿಯನ್ನು ನಿಡಿ-10 ಎಂದು ಗುರುತಿಸಲಾಯಿತು.

**ಪ್ರತಿವಾದಿ ಪರ ವಕೀಲರು ಮುಂದುವರೆದ ಮುಖ್ಯ ವಿಚಾರಣೆಗೆ ಸಮಯಾವಕಾಶ ಕೋರಿದ್ದು, ಸಮಯಾವಕಾಶ ನೀಡಲಾಯಿತು.**

( ಸಾಕ್ಷಿ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು. )

**ಓ. ಹೇ. ಕೇ. ಸರಿ ಇದೆ.**

**1 ನೇ ಹೆಚ್ಚುವರಿ ಮತ್ತು ಜೆಎಂಎಫ್‌ಸಿ ನ್ಯಾಯಾಧೀಶರು**

**ಕೆ.ಆರ್.ನಗರ**